ತೋಟಗಾರಿಕೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

(ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಲು ಸರ್ಕಾರದಿಂದ ನೀಡಿದ ಸಹಾಯಧನ ಎಷ್ಟು, ಎಷ್ಟು ಪ್ರಮಾಣದಲ್ಲಿ ಸಹಾಯಧನವನ್ನು ನೀಡಲು ನೀತಿ ರೂಪಿಸಲಾಗಿದೆ

(ಆ) ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಿಂದ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡು ಸಹಾಯ ಧನವನ್ನು ಕೋರಿರುವ ರೈತರ ಸಂಖ್ಯೆ ಎಷ್ಟು ಹಾಗೂ ಒಟ್ಟು ಮೊತ್ತ ಎಷ್ಟು?

(ಇ) ಈ ಪೈಕಿ ಇಲ್ಲಿಯವರೆವಿಗೂ ಬಿಡುಗಡೆಯಾದ ಹಣ ಎಷ್ಟು, ಬಾಕಿ ಇರುವ ಸಹಾಯಧನ ಎಷ್ಟು?

ಶ್ರೀ ಶಶಿಕಾಂತ ಅ ನಾಯಿಕ (ತೋಟಗಾರಿಕೆ ಸಚಿವರು) –

(ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ಎಂದರೆ 2004–05 ರಿಂದ 2006–07 ರವರೆಗೆ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಲು ಸರ್ಕಾರದಿಂದ ನೀಡಿದ ಒಟ್ಟು ಸಹಾಯಧನ ರೂ 91 ಕೋಟಿಗಳು, ಬಿಜಾಪುರ ಮತ್ತು ಕೋಲಾರ ಜಿಲ್ಲೆಗಳಿಗೆ ಶೇ 100 ರಷ್ಟು ಹಾಗೂ ಇತರೆ ಜಿಲ್ಲೆಗಳಿಗೆ ಶೇ 75ರಷ್ಟು ಸಹಾಯಧನವನ್ನು ನೀಡಲು ನೀತಿ ರೂಪಿಸಲಾಗಿದೆ

(ಆ) ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಿಂದ ಹನಿ ನೀರಾವರಿ ಪದ್ಧತಿ ಅಳವಡಿಸಿಕೊಂಡು ಸಹಾಯಧನ ಕೋರಿರುವ ಒಟ್ಟು ರೈತರ ಸಂಖ್ಯೆ 319 ಹಾಗೂ ಮೊತ್ತ ರೂ 114 80 ಲಕ್ಷಗಳು

(ಇ) ಇಲ್ಲಿಯವರೆಗೂ ರೂ 47 28 ಲಕ್ಷಗಳನ್ನು ಬಿಡುಗಡೆ ಮಾಡಿ ವಿನಿಯೋಗಿಸಲಾಗಿದೆ ಬಾಕಿ ಇರುವ ಸಹಾಯಧನ ರೂ 67 52 ಲಕ್ಷ

749 (1214) ಶ್ರೀಮತಿ ಶಕುಂತಲಾ ಟಿ ಶೆಟ್ಟಿ (ಪುತ್ತೂರು) – ತೋಟಗಾರಿಕೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು, ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು (ವಿವರ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು,

(ಇ) ಇಲ್ಲದಿದ್ದಲ್ಲಿ ಕಾರಣಗಳೇನು,

(ಈ) ಖಾಲಿ ಇರುವ ಹುದ್ದೆಗಳ ನೇಮಕಾತಿಯ ವಿಳಂಬದಿಂದ ಸಾರ್ವಜನಿಕರಿಗೆ ಹಾಗೂ ರೈತರಿಗೆ ತೊಂದರೆಯಾಗುತ್ತಿರುವುದು ನಿಜವೇ,

(ಉ) ಹಾಗಿದ್ದಲ್ಲಿ ಸರ್ಕಾರದ ಕ್ರಮವೇನು?

ಶ್ರೀ ಶಶಿಕಾಂತ ಅ ನಾಯಿಕ (ತೋಟಗಾರಿಕೆ ಸಚಿವರು) –

(ಅ) ತೋಟಗಾರಿಕೆ ಇಲಾಖೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನಲ್ಲಿ ಖಾಲಿ ಇರುವ ಹುದ್ದೆ ಹಾಗೂ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತದೆ

ಕ್ರ ಸಂಖ್ಯೆ	ಮಂಜೂರಾದ ಹುದ್ದೆಗಳ ಸಂಖ್ಯೆ ಹಾಗೂ ಪದನಾಮ	ಖಾಲಿ ಇಡುವ ಹುದ್ದೆಗಳ ಸಂಖ್ಯೆ	ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯ ಸಂಖ್ಯೆ
1	ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು –01 ಹುದ್ದೆ	–	01
2	ಸಹಾಯಕ ತೋಟಗಾರಿಕೆ – ನಿರ್ದೇಶಕರು –01 ಹುದ್ದೆ	–	01
3	ಸಹಾಯಕ ತೋಟಗಾರಿಕೆ ಅಧಿಕಾರಿ –04 ಹುದ್ದೆಗಳು	03	01
4	ತೋಟಗಾರಿಕೆ ಸಹಾಯಕ –04 ಹುದ್ದೆಗಳು	01	03
5	ತೋಟಗಾರರು –04 ಹುದ್ದೆಗಳು	01	03
6	ದ್ವಿತೀಯ ದರ್ಜೆ ಸಹಾಯಕ –01 ಹುದ್ದೆ	–	01
	ಒಟ್ಟು –15 ಹುದ್ದೆಗಳು	05	10

(ಆ) ಸರ್ಕಾರಿ ಆದೇಶ ಸಂಖ್ಯೆ/ಕೃತೋಇ 139/ತೋಸೇಪ 2006 ದಿನಾಂಕ 24–01–07 ರನ್ವಯ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ತೋಟಗಾರಿಕೆ ಅಧಿಕಾರಿ, ತೋಟಗಾರಿಕೆ ಸಹಾಯಕರು ಮತ್ತು ತೋಟಗಾರರ ಹುದ್ದೆಗಳನ್ನು (ಪುತ್ತೂರು ತಾಲ್ಲೂಕಿನ ಸಹಾಯಕ ತೋಟಗಾರಿಕೆ ಅಧಿಕಾರಿ, ತೋಟಗಾರಿಕೆ ಸಹಾಯಕ ಮತ್ತು ತೋಟಗಾರರ ಹುದ್ದೆಗಳು ಸೇರಿದಂತೆ) 6 (ಆರು) ತಿಂಗಳ ಅವಧಿಗೆ ಅಥವಾ ಈ ಹುದ್ದೆಗಳಿಗೆ ನೇರ ನೇಮಕಾತಿ ಆಗುವ ತನಕ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಕಾತಿ ಮಾಡಲು ಆಯಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳು ಮತ್ತು ತೋಟಗಾರಿಕೆ ಉಪ ನಿರ್ದೇಶಕರು ರವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿದೆ ಸದ್ಯದಲ್ಲಿಯೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ

ಮುಂದುವರೆದು, ಇಲಾಖೆಯಲ್ಲಿ ಖಾಲಿ ಇರುವ 53 ಸತೋನಿ ಮತ್ತು 589 ಸಹಾಯಕ ತೋಟಗಾರಿಕೆ ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗವು

ಅಧಿಸೂಚನೆ ಹೊರಡಿಸಿದ್ದು, ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಸಂದರ್ಶನಗಳನ್ನು ನಡೆಸಲಾಗುತ್ತಿದೆ

(ಇ) ಮೇಲೆ ತಿಳಿಸಿದಂತೆ ಈಗಾಗಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ

(ಈ) ಖಾಲಿ ಹುದ್ದೆಗಳ ಭರ್ತಿಗೆ ಈಗಾಗಲೇ ಕ್ರಮಕೈಗೊಳ್ಳಲಾಗಿದೆ ಮುಂದುವರೆದು ಹಾಲಿ ಲಭ್ಯವಿರುವ ಅಧಿಕಾರಿ/ಸಿಬ್ಬಂದಿ ಸೇವೆ ಉಪಯೋಗಿಸಿಕೊಂಡು ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಇಲಾಖಾ ಕೆಲಸಗಳನ್ನು ನಿರ್ವಹಿಸಲಾಗುತ್ತಿದೆ

(ಉ) ಉದ್ಭವಿಸುವುದಿಲ್ಲ

750 (1215) ಶ್ರೀಮತಿ ಶಕುಂತಲಾ ಟಿ ಶೆಟ್ಟಿ (ಪುತ್ತೂರು) – ಕೃಷಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

(ಅ) ಕೃಷಿ ಇಲಾಖೆಯಿಂದ ರೈತರಿಗೆ ವಿತರಿಸುವ ಡೀಸಲ್ ಪಂಪ್‌ಗಳು, ಪ್ರಯೋಜನವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

(ಆ) ಬಂದಿದ್ದಲ್ಲಿ, ಇದಕ್ಕೆ ಬದಲಿ ವ್ಯವಸ್ಥೆ ಮಾಡಲಾಗುವುದೇ, ಇಲ್ಲದಿದ್ದಲ್ಲಿ ಕಾರಣವೇನು (ವಿವರ ನೀಡುವುದು),

(ಇ) ರೈತರ ಕೆರೆಗಳಲ್ಲಿ ನೀರು ಇಲ್ಲದೆ ಡೀಸೆಲ್ ಪಂಪು ಪ್ರಯೋಜನಕ್ಕೆ ಬರದಿರುವುದು ನಿಜವಲ್ಲವೇ,

(ಈ) 2006–07ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ಕೃಷಿ ಇಲಾಖೆಯಿಂದ ವಿತರಿಸಲಾದ ಡೀಸೆಲ್ ಪಂಪು ಸೆಟ್‌ಗಳೆಷ್ಟು, ಇದರ ಪ್ರಯೋಜನ ಪಡೆದ ರೈತರ ಸಂಖ್ಯೆ ಎಷ್ಟು (ವಿವರ ಒದಗಿಸುವುದು),

(ಉ) 2007–08ನೇ ಸಾಲಿನಲ್ಲಿ ಡೀಸೆಲ್ ಪಂಪು ಬದಲು ವಿದ್ಯುತ್ ಪಂಪು ನೀಡಲು ವ್ಯವಸ್ಥೆ ಮಾಡಲಾಗುವುದೇ, ಹಾಗಿದ್ದಲ್ಲಿ, ಇದಕ್ಕೆ ನೀಡುವ ಸಹಾಯಧನ ಎಷ್ಟು?

ಶ್ರೀ ಬಂಡೆಪ್ಪ ಕಾಶಂಪೂರ (ಕೃಷಿ ಸಚಿವರು) –

(ಅ) ಇಲ್ಲಾ

(ಆ) ಉದ್ಭವಿಸುವುದಿಲ್ಲ